ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)
ಉಪತಹಶೀಲ್ದಾರವರ ನ್ಯಾಯಾಲಯ ನಾಡ ಕಛೇರಿ ಗುಡೇಕೋಟೆ

ಸಂ/ಕಂ/ಹ.ಬ./ನಾಕಗು/59/2015-16. ದಿನಾಂಕ: 07-06-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಮದ್ದಾನಮ್ಮ ಗಂಡ ಲೇಟ್ ಗಂಗಪ್ಪ<br>2)ಶರಣಮ್ಮ ಗಂಡ ಲೇಟ್ ಗಂಗಪ್ಪ<br>ಮಹಾದೇವಪುರ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಗುಡೇಕೋಟೆ |
| ಕೂಡ್ಲಿಗಿ ತಾಲೂಕು ಅಪ್ಪಯ್ಯನಹಳ್ಳಿ ಗ್ರಾಮದ ಸನಂ 358. ವಿಸ್ತೀರ್ಣ 1-47. ಎಕ್ರೆ ಜಮೀನನ್ನು ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಅಪ್ಪಯ್ಯನಹಳ್ಳಿ ಗ್ರಾಮದ ಸನಂ 358. ವಿಸ್ತೀರ್ಣ 1-47. ಎಕ್ರೆ ಜಮೀನನ್ನು ಸದರಿ ತಾಲೂಕು ಮಹಾದೇವಪುರ ಗ್ರಾಮದ ಮದ್ದಾನಮ್ಮ ಗಂಡ ಲೇಟ್ ಗಂಗಪ್ಪ ಇವರು ದಿನಾಂಕ 02-01-2014. ರ ಪಾಲು ವಿಭಾಗದ ಪತ್ರ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಅಪ್ಪಯ್ಯನಹಳ್ಳಿ ಇವರು ನಮೂನೆ-21 ರ ನೋಟಿಸನ್ನು ದಿನಾಂಕ 14-07-2014 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ವಂಶವೃಕ್ಷ ಹಾಗೂ ಇತರೆ ದಾಖಲೆಗಳು ಸರಿಇಲ್ಲದ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್: 01/2014-15. ದಿನಾಂಕ 15-08-2014 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದೆಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸು ನೀಡಿ ದಿನಾಂಕ 26-04-2016 ರಿಂದ 07-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಅಪ್ಪಯ್ಯನಹಳ್ಳಿ ಗ್ರಾಮದ ಸನಂ 358. ವಿಸ್ತೀರ್ಣ 1-47. ಎಕ್ರೆ ಜಮೀನನ್ನು ನಮ್ಮಗಳ ಹೆಸರಲ್ಲಿ ಜಂಟಿ ಪಟ್ಟಾ ಲೆಕ್ಕ ದಾಖಲೆ ಇರುತ್ತದೆ. ನಾವುಗಳು ಸದರಿ ಜಮೀನನ್ನು ದಿನಾಂಕ 02-01-2014 ರಂದು ಪಾಲು ವಿಭಾಗ ಪತ್ರ ಬರೆಯಿಸಿರುತ್ತೇವೆ. ಸದರಿ ಪಾಲು ವಿಭಾಗದ ಪತ್ರ ಪ್ರಕಾರ ನನ್ನ ಹಿಸ್ಸಾಕ್ಕೆ ಬಂದಿರುತ್ತದೆ. ಕಾರಣ ಸದರಿ ಪಾಲು ವಿಭಾಗ ಪತ್ರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ...ಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಹಾಗೂ ಸದರಿ ಜಮೀನಿನ ಬಗ್ಗೆ ಗ್ರಾಮಲೆಕ್ಕಿಗರು ...ದಲ್ಲಿ ಮರು ವಿಚಾರಣೆ ಮಾಡಲಾಗಿ ಸದರಿ ಪಾಲು ವಿಭಾಗದ ಪತ್ರ ಪ್ರಕಾರ ಅರ್ಜಿದಾರರ ಹೆಸರಲ್ಲಿ ... ಬದಲಾವಣೆ ಮಾಡಲು ಯಾವ ಆಕ್ಷೇಪಣೆಗಳು ಇಲ್ಲವೆಂದು ವರದಿ ಸಲ್ಲಿಸಿರುತ್ತಾರೆ. ಕಾರಣ ಈ ...ನಂತೆ ಆದೇಶ ಮಾಡಲಾಗಿದೆ.

**-:ಆದೇಶ:-**

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಅಪ್ಪಯ್ಯನಹಳ್ಳಿ ಗ್ರಾಮದ ಸನಂ 358. ವಿಸ್ತೀರ್ಣ 1-47. ಎಕ್ರೆ ಜಮೀನನ್ನು ದಿನಾಂಕ 02-01-2014 ರ ಪಾಲು ವಿಬಾಗದ ಪತ್ರ ಪ್ರಕಾರ ಅರ್ಜಿದಾರರಾದ ಮದ್ದಾನಮ್ಮ ಗಂಡ ಲೇಟ್ ಗಂಗಪ್ಪ ಮಹಾದೇವಪುರ ಗ್ರಾಮ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ. ಹಾಗು ಮುದ್ರಾಂಕ ಶುಲ್ಕ ಪಾವತಿಸಲು ಸಹಾ ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳೀ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 07-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು

ಉಪತಹಶೀಲ್ದಾರರು
ನಾಡಕಛೇರಿ ಗುಡೇಕೋಟೆ
ಗುಡೇಕೋಟೆ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಮದ್ದಾನಮ್ಮ ಗಂಡ ಲೇಟ್ ಗಂಗಪ್ಪ. ಶರಣಮ್ಮ ಗಂಡ ಲೇಟ್ ಗಂಗಪ್ಪ. ಮಹಾದೇವಪುರ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಗುಡೇಕೋಟೆ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.